SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar
SDUAHER
**UNIVERSITY LIBRARY & LEARNING RESOURCE CENTRE**

Online Newspaper Clipping Service
**Dated, Tuesday, 02nd May– 2017**

**Pg.No.06**

ವಿಜಯವಾಣಿ

# ಸರ್ಕಾರಿ ಸೀಟು ಪಡೆದವರಿಗೆ ಗ್ರಾಮೀಣ ಸೇವೆ ಕಡ್ಡಾಯ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

'ಕಡ್ಡಾಯ ಗ್ರಾಮೀಣ ಸೇವೆ' ನಿಯಮ ಸರ್ಕಾರಿ ಕೋಟಾದಡಿ ಸೀಟು ಪಡೆದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ಕಾಯ್ದೆಗೆ ತಿದ್ದುಪಡಿ ತರಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಈ ಶೈಕ್ಷಣಿಕ ವರ್ಷದಿಂದಲೇ ನಿಯಮ ಜಾರಿಯಾಗುವ ಸಾಧ್ಯತೆ ಇದೆ.

ಈವರೆಗೆ ಎನ್ಆರ್ಐ, ಮ್ಯಾನೇಜ್‌ಮೆಂಟ್ ಸೇರಿ ಎಲ್ಲ ಕೋಟಾದ ಸೀಟುಗಳಿಗೂ ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಸೇವೆ ಕಡ್ಡಾಯ ಮಾಡಲಾಗಿತ್ತು. ಇದನ್ನು ಪ್ರಶ್ನಿಸಿ ಕೆಲವು ಖಾಸಗಿ ಕಾಲೇಜುಗಳ ವಿದ್ಯಾರ್ಥಿಗಳು ಹೈಕೋರ್ಟ್ ಮೆಟ್ಟಿಲೇರಿದ್ದರು. ವಿಚಾರಣೆ ನಡೆಸಿದ ಹೈಕೋರ್ಟ್ ಸರ್ಕಾರದ ಆದೇಶಕ್ಕೆ ಮಧ್ಯಂತರ ತಡೆಯಾಜ್ಞೆ ನೀಡಿತ್ತು.



» 2012ರ ಕಾಯ್ದೆ ತಿದ್ದುಪಡಿಗೆ ರಾಜ್ಯ ಸರ್ಕಾರ ನಿರ್ಧಾರ, ಈ ಶೈಕ್ಷಣಿಕ ವರ್ಷದಿಂದಲೇ ಅನುಷ್ಠಾನ ಸಾಧ್ಯತೆ

» ಎನ್ಆರ್ಐ, ಮ್ಯಾನೇಜ್‌ಮೆಂಟ್ ಕೋಟಾದ ವಿದ್ಯಾರ್ಥಿಗಳಿಗೆ ರಿಲೀಫ್

ಇತ್ತೀಚೆಗೆ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಪ್ರಮಾಣ ಪತ್ರ ಸಲ್ಲಿಸಿದ್ದು, ಸರ್ಕಾರಿ ಕೋಟಾದಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಮಾತ್ರವೇ ಗ್ರಾಮೀಣ ಸೇವೆ ಕಡ್ಡಾಯ ಎಂಬ ತಿದ್ದುಪಡಿ ತರಲು ಬಯಸಿರುವುದಾಗಿ ಉಲ್ಲೇಖಿಸಿದೆ. ರಾಜ್ಯ ಸರ್ಕಾರ ಪ್ರತಿಯೊಬ್ಬ ವೈದ್ಯಕೀಯ ವಿದ್ಯಾರ್ಥಿಗೆ ಸುಮಾರು 6 ಲಕ್ಷ ರೂ. ವೆಚ್ಚ ಮಾಡುತ್ತಿದೆ. ಇಷ್ಟು ಮಾಡಿದರೂ ಬಹುತೇಕ ವಿದ್ಯಾರ್ಥಿಗಳು ರಾಜ್ಯದಲ್ಲಿ ಸೇವೆ ಸಲ್ಲಿಸುವುದಕ್ಕೆ ಹಿಂದೇಟು ಹಾಕುತ್ತಾರೆ. ಇದರಿಂದಾಗಿ ಗ್ರಾಮೀಣ ಭಾಗದಲ್ಲಿರುವ ರಾಜ್ಯದ ಬಹುತೇಕ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಕಾಡುತ್ತಿದೆ. 2017ನೇ ಸಾಲಿನಲ್ಲಿ ಸುಮಾರು 4 ಸಾವಿರ ವಿದ್ಯಾರ್ಥಿಗಳು ಎಂಬಿಬಿಎಸ್, ಎಂ.ಡಿ ಪದವಿಯನ್ನು ಪಡೆದಿದ್ದು, ಈ ಪೈಕಿ 18 ವಿದ್ಯಾರ್ಥಿಗಳು ಮಾತ್ರವೇ ಗ್ರಾಮೀಣ ಸೇವೆ ಆಯ್ಕೆ ಮಾಡಿಕೊಂಡಿದ್ದಾರೆ.

2015ರಲ್ಲಿ ರಾಜ್ಯ ಸರ್ಕಾರ ಗ್ರಾಮೀಣ ಸೇವೆ ಕಡ್ಡಾಯ ಮಾಡಿ ಆದೇಶ ಹೊರಡಿಸಿತ್ತು. ಆದೇಶದ ಪ್ರಕಾರ ವಿದ್ಯಾರ್ಥಿಗಳು ಗ್ರಾಮೀಣ ಸೇವೆ ಮಾಡುತ್ತೇವೆ ಎಂದು ಛಾಪಾ ಕಾಗದದಲ್ಲಿ ಸಹಿ ಮಾಡಿಕೊಟ್ಟು, ಒಂದು ವರ್ಷ ಸೇವೆ ಮಾಡಬೇಕಿತ್ತು. ಇಲ್ಲವಾದಲ್ಲಿ ಎಂಬಿಬಿಎಸ್ ಪದವಿ ಪ್ರಮಾಣ ಪತ್ರ ದೊರೆಯುವುದಿಲ್ಲ. ಜತೆಗೆ 10 ಲಕ್ಷ ರೂ. ದಂಡ ಕೂಡ ಕಟ್ಟಬೇಕೆಂದು ಆದೇಶಿಸಲಾಗಿತ್ತು.



ಕರ್ನಾಟಕ ಕಡ್ಡಾಯ ಸೇವಾ ತರಬೇತಿ ಕಾಯ್ದೆ 2012ಕ್ಕೆ ತಿದ್ದುಪಡಿ ತರುವ ಮುಖಾಂತರ ಸರ್ಕಾರಿ ಕೋಟಾದಡಿ ಪದವಿ ಮತ್ತು ಸ್ನಾತಕೋತ್ತರ ಪದವಿ ಸೀಟು ಪಡೆದಿರುವವರು ಮಾತ್ರ ಒಂದು ವರ್ಷ ಕಡ್ಡಾಯ ಸೇವೆ ಮಾಡಬೇಕೆಂಬ ಅಂಶವನ್ನು ಸೇರಿಸಲಾಗುವುದು. ಹೈಕೋರ್ಟ್ ನೀಡಿರುವ ತಡೆಯಾಜ್ಞೆ ತೆರವು ಮಾಡುವಂತೆ ಅಫಿಡವಿಟ್ ಸಲ್ಲಿಸಲಾಗಿದೆ.

| ಕೆ.ಆರ್. ರಮೇಶ್ ಕುಮಾರ್ ಆರೋಗ್ಯ ಸಚಿವ